**All India Radio: Bangalore**
**Regional Bulletin In Kannada**
**13.06.2026 / 2.30 p.m.**

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**13.06.2026 / 2.30 p.m.**
**<><><><>**

ಮುಖ್ಯಾಂಶಗಳು

1. ವಿಧಾನಸೌಧದಲ್ಲಿ ಜಿಲ್ಲಾಧಿಕಾರಿಗಳು, ಪೊಲೀಸ್ ವರಿಷ್ಠಾಧಿಕಾರಿಗಳೊಂದಿಗೆ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಪ್ರಗತಿ ಪರಿಶೀಲನಾ ಸಭೆ
2. ಸೋಲದೇವನಹಳ್ಳಿ ರೈಲು ನಿರ್ವಹಣಾ ಘಟಕದ ನಿರ್ಮಾಣಕ್ಕೆ ಟೆಂಡರ್ ಆಹ್ವಾನಿಸಿದ ಬೈ-ರೈಡ್
3. ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಉಡುಪಿ ಪ್ರವಾಸ ; ದೀನ್ ದಯಾಳ್ ಉಪಾಧ್ಯಯ ಪ್ರಶಿಕ್ಷಣ ಮಹಾ ಅಭಿಯಾನ ಉದ್ಘಾಟನೆ
4. ಬಿಡದಿಯಲ್ಲಿ ರೈತರ ಭೂಮಿ ಕಸಿದು ಟೌನ್‌ಶಿಪ್ ನಿರ್ಮಾಣ ಸರಿಯಲ್ಲ - ಸರ್ಕಾರಕ್ಕೆ ಪ್ರತಿಪಕ್ಷ ನಾಯಕ ಆರ್.ಅಶೋಕ ಎಚ್ಚರಿಕೆ
5. ಜಾಗತಿಕ ಸವಾಲುಗಳ ನಡುವೆಯೂ ಭಾರತದ ಆರ್ಥಿಕ ಬೆಳವಣಿಗೆ ದರ ಉತ್ತಮ ; ಬಿಜೆಪಿ ನಾಯಕ ಡಾ.ರಾಧಾ ಮೋಹನ್‌ದಾಸ್ ಅಗರ್ವಾಲ್ ಅಭಿಮತ

<><><><>

ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಇಂದು ವಿಧಾನಸೌಧದ ಸಮ್ಮೇಳನ ಸಭಾಂಗಣದಲ್ಲಿ ಎಲ್ಲಾ ಜಿಲ್ಲಾಧಿಕಾರಿಗಳು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಹಾಗೂ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳೊಂದಿಗೆ ಸಭೆ ನಡೆಸಿದರು. ಸಭೆಯಲ್ಲಿ ಸಚಿವರಾದ ರಾಮಲಿಂಗಾರೆಡ್ಡಿ, ಕೆ.ಎಚ್.ಮುನಿಯಪ್ಪ, ಕೆ.ಜೆ.ಜಾರ್ಜ್, ಸತೀಶ್ ಜಾರಕಿಹೊಳಿ, ಈಶ್ವರ್ ಖಂಡ್ರೆ, ಎಂ.ಬಿ.ಪಾಟೀಲ್, ಪ್ರಿಯಾಂಕ್ ಖರ್ಗೆ ಸೇರಿದಂತೆ ಹಲವು ಸಚಿವರು ಭಾಗವಹಿಸಿದ್ದರು.

<><><><>

ಬೆಂಗಳೂರು ನಗರದ ಉಪನಗರ ರೈಲು ಸೇವೆಗಳ ಕಾರ್ಯಾಚರಣೆಗೆ ಬೆನ್ನೆಲುಬಾಗಿ ಕಾರ್ಯ ನಿರ್ವಹಿಸಲಿರುವ ಸೋಲದೇವನಹಳ್ಳಿ ರೈಲು ನಿರ್ವಹಣಾ ಘಟಕದ ನಿರ್ಮಾಣಕ್ಕಾಗಿ ಬೈ-ರೈಡ್

ಟೆಂಡರ್ ಆಹ್ವಾನಿಸಿದೆ. ಜಿಎಸ್‌ಟಿ ಹೊರತುಪಡಿಸಿ ೨೦೦.೩ ಕೋಟಿ ರೂಪಾಯಿ ನಿಗದಿಪಡಿಸಲಾಗಿದೆ. ಟೆಂಡರ್ ಕಾಮಗಾರಿಗೆ ಬಿಡ್ ಸಲ್ಲಿಸಲು ಆಗಸ್ಟ್ ೧೨ ಕೊನೆಯ ದಿನವಾಗಿದೆ. ಚಿಕ್ಕಬಾಣಾವರ ಉಪನಗರ ರೈಲು ನಿಲ್ದಾಣದ ಸಮೀಪ ನಿರ್ಮಾಣವಾಗಲಿರುವ ಈ ಘಟಕವು ಕಾರಿಡಾರ್-೨ ಮತ್ತು ಕಾರಿಡಾರ್-೪ರ ರೈಲುಗಳ ಕಾರ್ಯಾಚರಣೆ ಹಾಗೂ ನಿರ್ವಹಣೆಯ ಹೊಣೆ ಹೊರಲಿದೆ. ಈ ಯೋಜನೆಗಾಗಿ ಈಗಾಗಲೇ ೨೬ ಎಕರೆ ಖಾಸಗಿ ಭೂಮಿಯನ್ನು ಸ್ವಾಧೀನ ಪಡಿಸಿಕೊಳ್ಳಲಾಗಿದೆ. ಇದು ಬೆಂಗಳೂರಿನ ಜನತೆಗೆ ಉತ್ತಮ ಹಾಗೂ ವಿಶ್ವಾಸಾರ್ಹ ಮತ್ತು ಸುರಕ್ಷಿತ ಉಪನಗರ ಸಾರಿಗೆಯನ್ನು ಒದಗಿಸುವ ಕಾರ್ಯತಂತ್ರದ ಭಾಗವಾಗಿದೆ ಎಂದು ಬೈ-ರೈಡ್ ವ್ಯವಸ್ಥಾಪಕ ನಿರ್ದೇಶಕ ಲಕ್ಷ್ಮಣ್ ಸಿಂಗ್ ತಿಳಿಸಿದ್ದಾರೆ.

<><><><>

ರಾಜ್ಯ ಪ್ರವಾಸದಲ್ಲಿರುವ ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಉಡುಪಿಯಲ್ಲಿ ಇಂದು ಹಲವು ದೇವಾಲಯಗಳ ದರ್ಶನ ನಡೆಸಿದ್ದಾರೆ. ಉಡುಪಿಯ ಕೃಷ್ಣ ಮಠದಲ್ಲಿ ದೇವರ ದರ್ಶನ ಪಡೆದ ಅವರು, ಪರ್ಯಾಯ ಪೀಠಾಧೀಶರಾದ ವೇದವರ್ಧನ ತೀರ್ಥ ಶ್ರೀಪಾದರಿಂದ ಫಲ ಮಂತ್ರಾಕ್ಷತೆ ಪಡೆದುಕೊಂಡರು. ಇದೇ ವೇಳೆ ಕೃಷ್ಣ ಮಠದಲ್ಲಿ ದೇವರ ನೈವೇದ್ಯಕ್ಕಾಗಿ ಹೊಸದಾಗಿ ನಿರ್ಮಿಸಿದ ಅಡುಗೆ ಕೋಣೆಯನ್ನು ಉದ್ಘಾಟಿಸಿದರು. ಬಳಿಕ ಅವರು, ಉಡುಪಿಯಲ್ಲಿ ಆಯೋಜಿಸಲಾಗಿದ್ದ ಪಂಡಿತ್ ದೀನ್ ದಯಾಳ್ ಉಪಾಧ್ಯಯ ಪ್ರಶಿಕ್ಷಣ ಮಹಾ ಅಭಿಯಾನ ಎಂಬ ತರಬೇತಿ ಕಾರ್ಯಕ್ರಮವನ್ನು ಉದ್ಘಾಟಿಸಿದರು.

<><><><>

ಬಿಡದಿಯಲ್ಲಿ ರೈತರ ಜಮೀನಿನ ಮೇಲೆ ಬುಲ್ಡೋಜರ್ ಓಡಿಸಿ ರಿಯಲ್ ಎಸ್ಟೇಟ್ ಸಾಮ್ರಾಜ್ಯ ಕಟ್ಟಲು ಹೊರಟಿರುವ ಸರ್ಕಾರದ ವಿರುದ್ಧ ಪ್ರತಿಪಕ್ಷ ನಾಯಕ ಆರ್.ಅಶೋಕ ಅಸಮಾಧಾನ ವ್ಯಕ್ತಪಡಿಸಿದ್ದಾರೆ. ೪೮೦ ದಿನಗಳಿಂದ ಅನ್ನದಾತರು ನಡೆಸುತ್ತಿರುವ ಹೋರಾಟ, ಕಣ್ಣೀರು ಮತ್ತು ಆಕ್ರೋಶವನ್ನು ಲೆಕ್ಕಿಸದೆ ಟೌನ್‌ಶಿಪ್ ಹೆಸರಿನಲ್ಲಿ ೪೯೯ ಎಕರೆ ಫಲವತ್ತಾದ ಕೃಷಿ ಭೂಮಿಯನ್ನು ಕಬಳಿಸಲು ಅಂತಿಮ ಅಧಿಸೂಚನೆ ಹೊರಡಿಸಿರುವುದು ಸರ್ಕಾರದ ನಿಜ ಬಣ್ಣ ಬಯಲು ಮಾಡಿದೆ ಎಂದು ವ್ಯಂಗ್ಯವಾಡಿದ್ದಾರೆ. ಕೇವಲ ಒಂದೂವರೆ ವರ್ಷದಲ್ಲಿ ಜನವಿರೋಧಿ ಸರ್ಕಾರ ಇತಿಹಾಸದ ಪುಟ ಸೇರಲಿದೆ ಎಂದು ತಿಳಿಸಿದ್ದಾರೆ. ರೈತರ ಭೂಮಿಯನ್ನು ಕಸಿದು ಟೌನ್‌ಶಿಪ್ ಮಾಡುವುದು ಅಭಿವೃದ್ಧಿಯಲ್ಲ. ಇದು ರೈತರ ಭವಿಷ್ಯದ ಸಮಾಧಿ ಎಂದು ಸರ್ಕಾರಕ್ಕೆ ಎಚ್ಚರಿಕೆ ನೀಡಿದ್ದಾರೆ.

<><><>

ಲೋಕಾಯುಕ್ತ ಅಧಿಕಾರಿಗಳು ದಾಳಿ ನಡೆಸಿದ ಬಳಿಕ ಅನ್ನಭಾಗ್ಯ ಯೋಜನೆಯ ಫಲಾನುಭವಿಗಳಿಗೆ ಮೀಸಲಾದ ನೂರಾರು ಕ್ವಿಂಟಾಲ್ ಪಡಿತರ ಅಕ್ಕಿ ಮತ್ತು ರಾಗಿಯನ್ನು ಅಕ್ರಮವಾಗಿ ಮಾರಾಟ ಮಾಡಿರುವುದು ಬೆಳಕಿಗೆ ಬಂದಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಆರೋಪಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಭ್ರಷ್ಟ ಅಧಿಕಾರಿಗಳು ಸೇರಿದಂತೆ ಈ ಪ್ರಕರಣದಲ್ಲಿ ಕೈವಾಡವಿರುವವರನ್ನು ತಕ್ಷಣವೇ ಬಂಧಿಸಬೇಕೆಂದು ಒತ್ತಾಯಿಸಿದ್ದಾರೆ. ಖಾಸಗಿ ಗೋದಾಮಿನಲ್ಲಿ ಅನ್ನಭಾಗ್ಯ ಯೋಜನೆಯ ಸುಮಾರು ೩೫ ಸಾವಿರ ಚೀಲಗಳು ಪತ್ತೆಯಾಗಿವೆ ಎಂದು ಅವರು ದೂರಿದ್ದಾರೆ.

<><><>

ಭಾರತ ೨೦೩೧ರ ವೇಳೆಗೆ ವಿಶ್ವದ ಮೂರನೇ ಅತಿದೊಡ್ಡ ಆರ್ಥಿಕ ಶಕ್ತಿಶಾಲಿ ರಾಷ್ಟ್ರವಾಗಿ ಹೊರಹೊಮ್ಮಲಿದೆ ಎಂದು ರಾಜ್ಯಸಭಾ ಸದಸ್ಯ, ಬಿಜೆಪಿ ರಾಷ್ಟ್ರೀಯ ಪ್ರಧಾನಕಾರ್ಯದರ್ಶಿ ಡಾ.ರಾಧಾಮೋಹನ್ ದಾಸ್ ಅಗರ್ವಾಲ್ ಅಭಿಪ್ರಾಯಪಟ್ಟಿದ್ದಾರೆ. ಮಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಪ್ರಧಾನಿ ಮೋದಿಯವರ ಅಧಿಕಾರಾವಧಿಯಲ್ಲಿ ರಷ್ಯಾ-ಉಕ್ರೇನ್ ಮತ್ತು ಅಮೆರಿಕಾ -ಇರಾನ್ ಸಂಘರ್ಷಗಳಿಂದ ಉಂಟಾದ ಇಂಧನ ಬಿಕ್ಕಟ್ಟು ಮತ್ತು ವಿಶ್ವ ಆರ್ಥಿಕ ಹಿಂಜರಿತ ಸೇರಿದಂತೆ ಜಾಗತಿಕ ಸವಾಲುಗಳ ನಡುವೆಯೂ, ಭಾರತ ವಿಶ್ವದ ಅತ್ಯುನ್ನತ ಆರ್ಥಿಕ ಬೆಳವಣಿಗೆಯ ದರ ಶೇಕಡಾ ೭.೭ರಷ್ಟು ತಲುಪಿದೆ ಎಂದು ಹೇಳಿದ್ದಾರೆ. ಇಂತಹ ಸಂದಿಗ್ಧ ಪರಿಸ್ಥಿತಿಯಲ್ಲೂ ಆರ್ಥಿಕ ಬೆಳವಣಿಗೆಯ ದರ ಹೆಚ್ಚಾಗಿರುವುದು ಸಂತಸದ ವಿಚಾರ ಎಂದು ತಿಳಿಸಿದ್ದಾರೆ.

<><><>

ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದ ನೇತೃತ್ವದಲ್ಲಿ ಈ ವರ್ಷದ ಪರಿಸರ ದಿನಾಚರಣೆ ಅಂಗವಾಗಿ ರಾಜ್ಯಾದ್ಯಂತ ಐದು ಕೋಟಿ ಸಸಿಗಳನ್ನು ನೆಡುವ ಅಭಿಯಾನವನ್ನು ಹಮ್ಮಿಕೊಳ್ಳಲಾಗಿದೆ. ಚಿಕ್ಕಬಳ್ಳಾಪುರ ತಾಲ್ಲೂಕಿನ ಮುದ್ದೇನಹಳ್ಳಿಯಲ್ಲಿ ಇಂದು ನಡೆದ ಕಾರ್ಯಕ್ರಮದಲ್ಲಿ ಹೈಕೋರ್ಟ್ ಮುಖ್ಯ ನ್ಯಾಯ ಮೂರ್ತಿ ವಿಭು ಭಕ್ರು ಸಾಂಕೇತಿಕವಾಗಿ ಸಸಿಗಳನ್ನು ನೆಡುವ ಮೂಲಕ ಚಾಲನೆ ನೀಡಿದರು. ಇದೇ ವೇಳೆ ಮಾತನಾಡಿದ ಅವರು,

ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿಯೂ ಕಾನೂನು ಸೇವೆಗಳ ಪ್ರಾಧಿಕಾರ ಐದು ಲಕ್ಷ ಗಿಡಗಳನ್ನು ನೆಡಲಿದೆ ಎಂದು ತಿಳಿಸಿದರು.

<><><>

ಕರ್ನಾಟಕ ರಾಜ್ಯ ವಕೀಲರ ಪರಿಷತ್ ಸದಸ್ಯರಾಗಿ ಸಿ.ಎಂ.ಧನಂಜಯ ಆಯ್ಕೆಯಾಗಿದ್ದಾರೆ. ವಕೀಲರ ಪರಿಷತ್ ಇತಿಹಾಸದಲ್ಲಿ ಮೊದಲ ಪ್ರಯತ್ನದಲ್ಲೇ ಗೆಲುವು ಸಾಧಿಸುವ ಮೂಲಕ ಧನಂಜಯ ಇತಿಹಾಸ ಸೃಷ್ಟಿಸಿದ್ದಾರೆ. ವಕೀಲರ ಪರಿಷತ್‌ನ ೨೩ ಸ್ಥಾನಗಳಿಗೆ ಮಾರ್ಚ್ ೧೧ರಂದು ಚುನಾವಣೆ ನಡೆದಿತ್ತು. ಸಿ.ಎಂ.ಧನಂಜಯ ಕರ್ನಾಟಕ ಪ್ರದೇಶ ಕಾಂಗ್ರೆಸ್ ಸಮಿತಿ ಕಾನೂನು, ಮಾನವಹಕ್ಕುಗಳು ಮತ್ತು ಮಾಹಿತಿ ಹಕ್ಕು ವಿಭಾಗದ ಹಾಲಿ ಅಧ್ಯಕ್ಷರಾಗಿದ್ದು, ಕರ್ನಾಟಕ ರಾಜ್ಯ ಕೈಗಾರಿಕಾ ಮೂಲಸೌಕರ್ಯ ಅಭಿವೃದ್ಧಿ ನಿಗಮದ ಅಧ್ಯಕ್ಷರಾಗಿಯೂ ಸೇವೆ ಸಲ್ಲಿಸಿದ್ದಾರೆ.

<><><>

ಉತ್ತರಕನ್ನಡ ಜಿಲ್ಲೆಯ ಎಲ್ಲಾ ನಗರಸ್ಥಳೀಯ ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಪೌರಕಾರ್ಮಿಕರಿಗೆ ಗೃಹಭಾಗ್ಯ ಯೋಜನೆಯಡಿ ವಸತಿ ವ್ಯವಸ್ಥೆ ಕಲ್ಪಿಸುವಂತೆ ಕರ್ನಾಟಕ ರಾಜ್ಯ ಸಫಾಯಿ ಕರ್ಮಚಾರಿ ಆಯೋಗದ ಅಧ್ಯಕ್ಷ ಪಿ.ರಘು ತಿಳಿಸಿದ್ದಾರೆ. ಪೌರಕಾರ್ಮಿಕರೊಂದಿಗೆ ನೇರ ಸಂವಾದ ಕಾರ್ಯಕ್ರಮ ಹಾಗೂ ಅಧಿಕಾರಿಗಳೊಂದಿಗೆ ನಡೆದ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಪೌರಕಾರ್ಮಿಕರಿಗೆ ಮನೆಯನ್ನು ಒದಗಿಸುವುದು ಎಲ್ಲಾ ನಗರಸ್ಥಳಿಯ ಸಂಸ್ಥೆಗಳ ಪ್ರಮುಖ ಕರ್ತವ್ಯವಾಗಿದೆ ಎಂದು ಹೇಳಿದ್ದಾರೆ. ಜಿಲ್ಲೆಯಲ್ಲಿ ಗೃಹಭಾಗ್ಯ ಯೋಜನೆಯಡಿ ಪೌರಕಾರ್ಮಿಕರಿಗೆ ಈಗಾಗಲೇ ನಿರ್ಮಾಣಗೊಂಡಿರುವ ಮನೆಗಳನ್ನು ತಕ್ಷಣವೇ ಹಸ್ತಾಂತರಿಸುವಂತೆ ಮತ್ತು ನಿರ್ಮಾಣ ಹಂತದಲ್ಲಿರುವ ಮನೆಗಳನ್ನು ಶೀಘ್ರದಲ್ಲಿ ಕಾಮಗಾರಿ ಮುಕ್ತಾಯಗೊಳಿಸಿ ಹಂಚಿಕೆ ಮಾಡಬೇಕು ಎಂದು ನಿರ್ದೇಶನ ನೀಡಿದ್ದಾರೆ.

<><><>

ಚಿತ್ರದುರ್ಗದ ನಗರ ಸಭೆ, ಪುರ ಸಭೆ, ಪಟ್ಟಣ ಪಂಚಾಯಿತಿ ಹಾಗೂ ಗ್ರಾಮ ಪಂಚಾಯಿತಿ ಅಧಿಕಾರಿಗಳು ತಮ್ಮ ವ್ಯಾಪ್ತಿಯ ಓವರ್‌ಹೆಡ್ ಟ್ಯಾಂಕ್‌ಗಳನ್ನು ಮಳೆಗಾಲ ಆರಂಭಕ್ಕೂ ಮುನ್ನ ತಪ್ಪದೇ ಸ್ವಚ್ಛಗೊಳಿಸಬೇಕು ಎಂದು ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಸೂಚನೆ ನೀಡಿದ್ದಾರೆ. ಸ್ಟಾಪ್ ಡಯೇರಿಯಾ-೨೦೨೮ ಅಭಿಯಾನದ ಸಭೆಯಲ್ಲಿ ಮಾತನಾಡಿದ ಅವರು,

ಯಾವುದೇ ಕಾರಣಕ್ಕೂ ಅಧಿಕಾರಿಗಳು ನಿರ್ಲಕ್ಷ್ಯ ವಹಿಸಬಾರದು. ನೀರಿನ ಮೂಲದಲ್ಲಿ ರಾಸಾಯನಿಕ ಹಾಗೂ ಜೈವಿಕ ತಪಾಸಣೆ ನಡೆಸಿ ದಾಖಲೆ ನಿರ್ವಹಿಸಬೇಕು. ಪ್ರತಿ ಓವರ್‌ಹೆಡ್ ಟ್ಯಾಂಕ್ ಬಳಿ ಕೊನೆಯ ಸ್ವಚ್ಛತೆ ದಿನಾಂಕದ ಬೋರ್ಡನ್ನು ಸಾರ್ವಜನಿಕರಿಗೆ ಕಾಣುವಂತೆ ಅಳವಡಿಸಬೇಕು ಎಂದು ತಿಳಿಸಿದ್ದಾರೆ. ಕಲುಷಿತ ನೀರು ಅಥವಾ ಪೈಪ್‌ಲೈನ್ ಸೋರಿಕೆಯಿಂದ ಹರಡುವ ಕಾಲರಾ, ಬೇಧಿಯಂತಹ ಸಾಂಕ್ರಾಮಿಕ ರೋಗಗಳನ್ನು ತಡೆಗಟ್ಟಲು ಸ್ಥಳೀಯ ಸಂಸ್ಥೆಗಳು ಮುಂಜಾಗ್ರತೆ ವಹಿಸಬೇಕು. ವಿದ್ಯಾರ್ಥಿ ನಿಲಯ, ಶಾಲಾ ಕಾಲೇಜುಗಳಲ್ಲಿಯೂ ಕುಡಿಯುವ ನೀರಿನ ಟ್ಯಾಂಕ್‌ಗಳನ್ನು ಕಡ್ಡಾಯವಾಗಿ ಸ್ವಚ್ಛಗೊಳಿಸಬೇಕು ಎಂದು ನಿರ್ದೇಶನ ನೀಡಿದ್ದಾರೆ.

<><><><>

ಬೆಂಗಳೂರು ಗ್ರಾಮಾಂತರ ಜಿಲ್ಲೆ ದೊಡ್ಡಬಳ್ಳಾಪುರ ತಾಲ್ಲೂಕಿನ ಹಾಡೋನಹಳ್ಳಿ ಕೃಷಿ ವಿಜ್ಞಾನ ಕೇಂದ್ರದಲ್ಲಿ ಬೆಂಗಳೂರು ಕೃಷಿ ವಿಶ್ವವಿದ್ಯಾನಿಲಯ, ಕೃಷಿ ತಂತ್ರಜ್ಞಾನ ಅಳವಡಿಕೆ ಸಂಶೋಧನಾ ಸಂಸ್ಥೆ ವತಿಯಿಂದ ಮುಂಗಾರು ತಾಂತ್ರಿಕ ಮತ್ತು ಕೃಷಿ ಉಳಿಸಿ ಅಭಿಯಾನ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು. ಬೆಂಗಳೂರಿನ ಪ್ರಧಾನ ವಿಜ್ಞಾನಿ ಡಾ.ಚಂದ್ರೇಗೌಡ ಮಾತನಾಡಿ, ಮಣ್ಣಿನ ಫಲವತ್ತತೆ ಕಾಪಾಡಿದರೆ ಮಾತ್ರ ಭವಿಷ್ಯದ ಕೃಷಿ ಸುಸ್ಥಿರವಾಗಲು ಸಾಧ್ಯ. ಮಣ್ಣಿನ ಪರೀಕ್ಷೆ, ಸಾವಯವ ಮತ್ತು ಜೈವಿಕ ಗೊಬ್ಬರಗಳ ಬಳಕೆ, ಬೆಳೆ ಪರಿವರ್ತನೆ, ಅಂತರ ಬೆಳೆಗಳ ಬಳಕೆ ಹಾಗೂ ನೈಸರ್ಗಿಕ ಸಂಪನ್ಮೂಲಗಳ ಸಂರಕ್ಷಣೆ ಇಂದಿನ ಕೃಷಿಯಲ್ಲಿ ಅಗತ್ಯವಾಗಬೇಕು ಎಂದು ತಿಳಿಸಿದ್ದಾರೆ. ಬೆಂಗಳೂರು ಕೃಷಿ ವಿಶ್ವವಿದ್ಯಾನಿಲಯದ ಕೃಷಿ ಹವಾಮಾನ ವಿಭಾಗದ ಪ್ರಾಧ್ಯಾಪಕ ಡಾ.ಎಂ.ಎನ್.ತಿಮ್ಮೇಗೌಡ ಮಾತನಾಡಿ, ಪ್ರಸ್ತುತ ವರ್ಷದಲ್ಲಿ ವಾಡಿಕೆಗಿಂತ ಶೇಕಡ ೩೦ ರಷ್ಟು ಮಳೆ ಕಡಿಮೆಯಾಗುವ ಸಾಧ್ಯತೆ ಇದೆ. ಹಾಗಾಗಿ ರೈತರು ನೀರಿನ ಸಂರಕ್ಷಣೆ, ಮಣ್ಣಿನ ಆರೋಗ್ಯ ಮತ್ತು ಫಲವತ್ತತೆ ಕಾಪಾಡಿಕೊಳ್ಳಲು ಕೃಷಿ ಹೊಂಡ ಮತ್ತು ಇಂಗು ಗುಂಡಿಗಳ ಮೂಲಕ ಮಳೆ ನೀರನ್ನು ಸಂರಕ್ಷಿಸುವುದು, ಇಳಿಜಾರಿಗೆ ಅಡ್ಡಲಾಗಿ ಬೇಸಾಯ ಮಾಡುವ ತಾಂತ್ರಿಕತೆಗಳನ್ನು ರೈತರು ಅಳವಡಿಸಿಕೊಳ್ಳಬೇಕು. ಜಮೀನಿನ ಬದುಗಳಲ್ಲಿ ಹೆಚ್ಚು ಸಸಿಗಳನ್ನು ನೆಡಬೇಕು ಎಂದು ಸಲಹೆ ನೀಡಿದ್ದಾರೆ.

<><><><>

ಸಂಕ್ಷಿಪ್ತ ಸುದ್ದಿಗಳು

೧. ದಾವಣಗೆರೆ ಜಿಲ್ಲೆಯಲ್ಲಿ ಕಳೆದ ವರ್ಷಕ್ಕೆ ಹೋಲಿಸಿದರೆ ಈ ಬಾರಿ ಡೆಂಘಿ ಪ್ರಕರಣಗಳ ಸಂಖ್ಯೆ ಗಣನೀಯವಾಗಿ ಹೆಚ್ಚಳಗೊಂಡಿದ್ದು, ಸೊಳ್ಳೆಗಳ ಉತ್ಪತ್ತಿ ತಡೆಗಟ್ಟಲು ತೀವ್ರ ಲಾರ್ವಾ ಸಮೀಕ್ಷೆ ಹಾಗೂ ಸೊಳ್ಳೆ ನಿಯಂತ್ರಣದ ಜಂಟಿ ಕಾರ್ಯಾಚರಣೆ ಆರಂಭಿಸುವಂತೆ ಜಿಲ್ಲಾಧಿಕಾರಿ ಜಿ.ಎಂ.ಗಂಗಾಧರಸ್ವಾಮಿ ಸೂಚಿಸಿದ್ದಾರೆ.

೨. ಗದಗ ಜಿಲ್ಲೆಯ ಹದಲಿ ಗ್ರಾಮ ಪಂಚಾಯಿತಿ ಕಚೇರಿಗೆ ನರಗುಂದ ತಾಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ಶ್ರೀಧರ್ ಚಿನಗುಂಡಿ ಭೇಟಿ ನೀಡಿ ಆಡಳಿತಾತ್ಮಕ ಹಾಗೂ ಸಾರ್ವಜನಿಕ ಸೇವೆಗಳ ಕುರಿತು ಪರಿಶೀಲನೆ ನಡೆಸಿದರು.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>